ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 21–10–2020

# ಮಾಧ್ಯಮ ಆಮಂತ್ರಣ

**ಪೊಲೀಸ್ ಹುತಾತ್ಮರ ಗೌರವಾರ್ಥ ಛಾಯಚಿತ್ರ ಪ್ರದರ್ಶನ**

**ಉದ್ಘಾಟನೆ : ಬಸವರಾಜ ಬೊಮ್ಮಾಯಿ, ಗೃಹಸಚಿವರು**

**ದಿನಾಂಕ : 22–10–2020, ಗುರುವಾರ, ಸಮಯ : ಸಂಜೆ 4.00 ಗಂಟೆಗೆ**

**ಸ್ಥಳ: ಕರ್ನಾಟಕ ಚಿತ್ರಕಲಾ ಪರಿಷತ್, ಕುಮಾರಕೃಪ ರಸ್ತೆ, ಬೆಂಗಳೂರು**

# ಪತ್ರಿಕಾ ಪ್ರಕಟಣೆ

## ಶಿಕ್ಷಣ ಇಲಾಖೆಯ ವರ್ಗಾವಣೆ ವೇಳಾಪಟ್ಟಿ ಪ್ರಕಟಿಸಲು ಮುಖ್ಯಮಂತ್ರಿ ಸೂಚನೆ

**ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ):**

ಶಿಕ್ಷಣ ಇಲಾಖೆಯ ಶಿಕ್ಷಕರು ಮತ್ತು ಉಪನ್ಯಾಸಕರ ವರ್ಗಾವಣೆ ಪ್ರಕ್ರಿಯೆಯನ್ನು ಕೂಡಲೇ ಪ್ರಾರಂಭಿಸಲು ಹಾಗೂ ಒಂದು ವಾರದೊಳಗೆ ಶಿಕ್ಷಣ ಇಲಾಖೆಯ ವರ್ಗಾವಣೆ ವೇಳಾಪಟ್ಟಿಯನ್ನು ಪ್ರಕಟಿಸಿ ವರ್ಗಾವಣೆ ಪ್ರಕ್ರಿಯೆ ಪಾರಂಭಿಸಲು ಮುಖ್ಯಮಂತ್ರಿಯವರು ಆದೇಶಿಸಿದ್ದಾರೆ.

ರಾಜ್ಯದ ಪ್ರಾಥಮಿಕ ಶಾಲೆ/ಪ್ರೌಢಶಾಲೆ/ಪದವಿಪೂರ್ವ ಕಾಲೇಜುಗಳ ಶಿಕ್ಷಕರು/ಉಪನ್ಯಾಸಕರುಗಳಿಗೆ ವರ್ಗಾವಣೆ ಸೌಲಭ್ಯಗಳಿದಲ್ಲದೆ ಆಂತಂಕಕ್ಕೆ ಒಳಗಾಗಿದ್ದಾರೆ ಹಾಗೂ ಈಗಾಗಲೇ ಸರ್ಕಾರ ವರ್ಗಾವಣೆ ಮಾರ್ಗಸೂಚಿ ಹೊರಡಿಸಿ 05 ತಿಂಗಳಾದರೂ ವರ್ಗಾವಣೆ ಪ್ರಕ್ರಿಯೆ ವೇಳಾಪಟ್ಟಿಯನ್ನು ಹೊರಡಿಸಿರುವುದಿಲ್ಲ. ಆದರೆ ಬೇರೆ ಇಲಾಖೆಗಳಲ್ಲಿ ವರ್ಗಾವಣೆ ಪ್ರಕ್ರಿಯೆಗಳು ಕಾಲಕಾಲಕ್ಕೆ ನಡೆಯುತ್ತಿರುತ್ತವೆ. ಇದರಿಂದ ನೌಕರರಿಗೆ ತಾರತಮ್ಯ ಮಾಡಲಾಗುತ್ತಿದೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಅಧ್ಯಕ್ಷರ ಮನವಿಗೆ ಸ್ಪಂದಿಸಿದ ಮುಖ್ಯಮಂತ್ರಿಗಳು ಕ್ರಮಕ್ಕೆ ಸೂಚನೆ ನೀಡಿದ್ದಾರೆ.

## ಹಬ್ಬಗಳ ಪ್ರಯುಕ್ತ ಕೆ.ಎಸ್.ಟಿ.ಡಿ.ಸಿ. ಯಿಂದ ಪ್ರವಾಸಿಗರಿಗೆ ಶೇ.30 ರವರೆಗೆ ರಿಯಾಯಿತಿ

**ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ):**

2020ನೇ ಸಾಲಿನ ದಸರಾ ಮಹೋತ್ಸವ ಹಾಗೂ ದೀಪಾವಳಿ ಹಬ್ಬದ ಹಿನ್ನೆಲೆಯಲ್ಲಿ ಪ್ರವಾಸಿಗರಿಗೆ ಶೇ.30 ರವರೆಗೂ ರಿಯಾಯಿತಿ ನೀಡಿ ವ್ಯವಸ್ಥಿತ ಪ್ರವಾಸಗಳನ್ನು ಆಯೋಜಿಸಲು ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಕ್ರಮಕೈಗೊಂಡಿರುತ್ತದೆ. ಈ ರಿಯಾಯಿತಿ ದರಗಳು ದಿನಾಂಕ: 30.11.2020ರ ವರೆಗಿನ ಪ್ರವಾಸಗಳಿಗೆ ಮಾತ್ರ ಅನ್ವಯಿಸುತ್ತದೆ.

ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮವು ರಾಜ್ಯಕ್ಕೆ ಆಗಮಿಸುವ ಪ್ರವಾಸಿಗರಿಗೆ ರಾಜ್ಯ ಹಾಗೂ ಅಂತರರಾಜ್ಯದ ವಿವಿಧ ಪ್ರವಾಸಿ ತಾಣಗಳಿಗೆ ವ್ಯವಸ್ಥಿತ ಪ್ರವಾಸಗಳನ್ನು ಆಯೋಜಿಸುತ್ತಾ ಬಂದಿರುತ್ತದೆ. ಕೋವಿಡ್–19 ಹೊಡೆತದಿಂದ ನಲುಗಿದ ಪ್ರವಾಸಿಗರನ್ನು ಮರಳಿ ಪ್ರವಾಸೋದ್ಯಮದತ್ತ ಹೆಚ್ಚು ಹೆಚ್ಚು ಆಕರ್ಷಿಸಲು ಹಾಗೂ ಪ್ರವಾಸಿಗರಿಗೆ ಕೈಗೆಟಕುವ ದರಗಳಲ್ಲಿ ಪ್ರವಾಸಿ ತಾಣಗಳನ್ನು ಭೇಟಿ ಮಾಡಲು ಅನುಕೂಲ ಕಲ್ಪಿಸಿದೆ.

ನಿಗಮವು ಪ್ರಸ್ತುತ ಇರುವ ಕೋವಿಡ್–19ನ ಎಲ್ಲಾ ಸುರಕ್ಷಾ ಮುಂಜಾಗ್ರತ ಕ್ರಮಗಳನ್ನು ಕೈಗೊಂಡಿರುತ್ತದೆ. ಪ್ರವಾಸಗಳ ವಾಹನಗಳನ್ನು ಪ್ರತಿದಿನ ಸ್ಯಾನಿಟೈಸ್ ಮಾಡಲಾಗುವುದು, ಪ್ರವಾಸಕ್ಕೆ ನಿಯೋಜಿಸುವ ಸಿಬ್ಬಂದಿಗಳಿಗೆ ಕಡ್ಡಾಯವಾಗಿ ಪ್ರತಿ ದಿನ ಥರ್ಮಲ್ ಸ್ಕ್ರೀನಿಂಗ್, ಮಾಸ್ಕ್, ಸ್ಯಾನಿಟೈಸರ್ ಬಳಸಲು ಸೂಚಿಸಲಾಗಿದೆ ಹಾಗೂ ಪ್ರವಾಸಗಳ ಸಂದರ್ಭದಲ್ಲಿ ಪ್ರವಾಸಿಗರು ಸಾಮಾಜಿಕ ಅಂತರ ಕಾಪಾಡುವುದು ಹಾಗೂ ಮಾಸ್ಕ್ ಧರಿಸುವುದನ್ನು ಕಡ್ಡಾಯಗೊಳಿಸಲಾಗಿದೆ.

ಈ ಪ್ರವಾಸಗಳನ್ನು ಎ.ಸಿ/ನಾನ್ ಎ.ಸಿ ಡಿಲಕ್ಸ್ ವಾಹನ ಸೌಲಭ್ಯದೊಂದಿಗೆ ಆಯೋಜಿಸುತ್ತಿದ್ದು, ಮುಂಗಡ ಬುಕ್ಕಿಂಗ್ ವ್ಯವಸ್ಥೆಯನ್ನು ನಿಗಮದ ಬುಕ್ಕಿಂಗ್ ಕೌಂಟರ್‌ಗಳು, ಕೆ.ಎಸ್.ಆರ್.ಟಿ.ಸಿ ಅವತಾರ್ ಪೋರ್ಟಲ್ ಹಾಗೂ ರೆಡ್‌ಬಸ್ ಪೋರ್ಟಲ್ ಮುಖಾಂತರ ಮಾಡಲಾಗುತ್ತಿದೆ. ಪ್ರವಾಸದ ಬುಕ್ಕಿಂಗ್‌ಗಾಗಿ ಯಶವಂತಪುರದಲ್ಲಿರುವ ಪ್ರಧಾನ ಬುಕ್ಕಿಂಗ್ ಕೇಂದ್ರವನ್ನು ಹಾಗೂ ಕೆಂಪೇಗೌಡ ಬಸ್ ನಿಲ್ದಾಣದಲ್ಲಿನ ನಿಗಮದ ಕೌಂಟರ್‌ನ್ನು ಸಂಪರ್ಕಿಸಬಹುದಾಗಿದೆ. ಅಲ್ಲದೆ, ನಿಗಮದ ಅಧಿಕೃತ ಟ್ರಾವೆಲ್ ಏಜೆಂಟ್ ಮುಖಾಂತರ ಬುಕ್ಕಿಂಗ್ ಮಾಡಬಹುದಾಗಿದೆ. ಆನ್‌ಲೈನ್ ಬುಕ್ಕಿಂಗ್ ದೂರವಾಣಿ ಸಂಖ್ಯೆ : 080–4334 4334/35, +91 8970650070 / +91 8970650075. ವೆಬ್‌ಸೈಟ್ ವಿಳಾಸ [www.kstdc.co](http://www.kstdc.co) ಹೆಚ್ಚಿನ ಮಾಹಿತಿಗಾಗಿ ಈ ಕೆಳಕಂಡ ದೂರವಾಣಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅ.23 ರಂದು ಕಿತ್ತೂರು ರಾಣಿ ಚೆನ್ನಮ್ಮ ಜಯಂತ್ಯೋತ್ಸವ

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ): ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಅಕ್ಟೋಬರ್ 23 ರಂದು ಬೆಳಿಗ್ಗೆ 11 ಗಂಟೆಗೆ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರ ಆವರಣದಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಿತ್ತೂರು ರಾಣಿ ಚೆನ್ನಮ್ಮ ಪ್ರತಿಮೆಗೆ ಮಾಲಾರ್ಪಣೆ ಹಾಗೂ ಉದ್ಘಾಟನೆಯನ್ನು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ನೆರವೇರಿಸುವರು. ಭಾರತ ಸರ್ಕಾರದ ರಾಸಾಯನಿಕ ಮತ್ತು ರಸಗೊಬ್ಬರ ಸಚಿವರಾದ ಡಿ.ವಿ.ಸದಾನಂದಗೌಡ ಹಾಗೂ ಹಣಕಾಸು ಸಚಿರಾದ ಶ್ರೀಮತಿ ನಿರ್ಮಲಾ ಸೀತಾರಾಮನ್ ಅವರು ಉಪಸ್ಥಿತರಿರುವರು. ಮುಖ್ಯ ಅತಿಥಿಗಳಾಗಿ ಸಚಿವರುಗಳು ಹಾಗೂ ಗಣ್ಯರು ಉಪಸ್ಥಿತರಿರುವರು.

## ಆನ್‌ಲೈನ್ ಶಿಕ್ಷಣ ಕುರಿತು ಸುತ್ತೋಲೆ

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ):

ರಾಜ್ಯದಲ್ಲಿ ನಡೆಯುತ್ತಿರುವ ಆನ್‌ಲೈನ್ ಶಿಕ್ಷಣದಿಂದಾಗಿ ವಿದ್ಯಾರ್ಥಿಗಳ ಕಣ್ಣಿಗೆ ಹೆಚ್ಚಾಗಿ ತೊಂದರೆಯಾಗುತ್ತಿರುವುದಾಗಿ ಮಾಧ್ಯಮಗಳಲ್ಲಿ ವರದಿ ಪ್ರಕಟವಾಗಿರುತ್ತದೆ. ಆನ್‌ಲೈನ್ ಶಿಕ್ಷಣ ಮಾರ್ಗದರ್ಶಿಯನ್ನು ತಜ್ಞರು ನೀಡಿರುವ ವರದಿ ಹಾಗೂ ಸಲಹೆಗಳ ಆಧಾರದ ಮೇರೆಗೆ ಸಿದ್ದಪಡಿಸಲಾಗಿದೆ. ಸದರಿ ಮಾರ್ಗದರ್ಶಿ ಹಾಗೂ ವರದಿಯ ಆಧಾರದ ಮೇರೆಗೆ ರಾಜ್ಯದ ಎಲ್ಲಾ ಶಾಲೆಗಳು ಆನ್‌ಲೈನ್ ಶಿಕ್ಷಣವನ್ನು ನಡೆಸುವಂತೆ ವಿವರವಾದ ಸುತ್ತೋಲೆಯನ್ನು ಇಂದೇ ಹೊರಡಿಸುವಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರಿಗೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಎಸ್. ಸುರೇಶ್‌ಕುಮಾರ್ ಅವರು ಸೂಚಿಸಿದ್ದಾರೆಂದು ಪ್ರಕಟಣೆ ತಿಳಿಸಿದೆ.

ಛಾಯಾಚಿತ್ರ ಶೀರ್ಷಿಕೆ)

ನಗರ ಸಶಸ್ತ್ರ ಮೀಸಲು ಪಡೆ, ಕೇಂದ್ರ ಹುತಾತ್ಮರ ಉದ್ಯಾನವನ, ಮೈಸೂರು ರಸ್ತೆ, ಬೆಂಗಳೂರು ಇಲ್ಲಿ ನಡೆದ ಪೋಲೀಸ್ ಸಂಸ್ಮರಣ ದಿನಾಚರಣೆಯಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರು ಭಾಗವಹಿಸಿ ಹುತಾತ್ಮರಾದ ಪೋಲೀಸ್ರಿಗೆ ಪುಷ್ಪ ಗುಚ್ಛ ಇಟ್ಟು ನಮನ ಸಲ್ಲಿಸಿದರು. ಗೃಹ ಸಚಿವ ಬಸವರಾಜ ಬೊಮ್ಮಾಯಿ, ಹಾಗೂ ಹಿರಿಯ ಪೋಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಂತಾಪ

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ):

ಕರ್ನಾಟಕದ ಹಿರಿಯ ಕಮ್ಯುನಿಸ್ಟ್ ನಾಯಕ ಕಾಮ್ರೇಡ್ ಮಾರುತಿ ಮಾನ್ಪಡೆ ಅವರ ನಿಧನಕ್ಕೆ ವಸತಿ ಸಚಿವ ವಿ. ಸೋಮಣ್ಣ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಹೋರಾಟದ ದೀಪವೊಂದು ನಂದಿದಂತಾಗಿದ್ದು ಇದರಿಂದ ರೈತ ಮತ್ತು ಕಾರ್ಮಿಕರ ಸಂಘಟನೆಗೆ ತುಂಬಲಾರದ ನಷ್ಟವುಂಟಾಗಿದೆ. ಭಗವಂತ ಅವರ ಆತ್ಮಕ್ಕೆ ಸದ್ಗತಿ ಕೊಡಲಿ ಹಾಗೂ ಅವರ ಕುಟುಂಬ ವರ್ಗಕ್ಕೆ ಮತ್ತು ಅವರ ಅಭಿಮಾನಿ ಬಳಗವಾದ ರೈತ, ಕಾರ್ಮಿಕ ವೃಂದಕ್ಕೆ ದು:ಖ ಭರಿಸುವ ಶಕ್ತಿ ನೀಡಲಿ ಎಂದು ಸಚಿವರು ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

# ಪತ್ರಿಕೋದ್ಯಮ ಪದವೀಧರರಿಗೆ ಅಪ್ರೆಂಟಿಸ್ ತರಬೇತಿ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ): ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಿಕೋದ್ಯಮ ಪದವೀಧರರಿಗೆ ವೃತ್ತಿಯಲ್ಲಿ ತೊಡಗಿಕೊಳ್ಳಲು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಹತ್ತು ತಿಂಗಳ ಅಪ್ರೆಂಟಿಸ್ ತರಬೇತಿಯನ್ನು ಹಮ್ಮಿಕೊಂಡಿದೆ.

2020-21 ನೇ ಸಾಲಿನಲ್ಲಿ ಇಲಾಖೆಯ ಜಿಲ್ಲಾ ಕಛೇರಿಗಳಲ್ಲಿ ಪರಿಶಿಷ್ಟ ಜಾತಿಯ ಇಬ್ಬರು ಹಾಗೂ ಪರಿಶಿಷ್ಟ ಪಂಗಡದ ಇಬ್ಬರು ಅಭ್ಯರ್ಥಿಗಳನ್ನು ಮೆರಿಟ್ ಹಾಗೂ ಸಂದರ್ಶನದ ಮೂಲಕ ಆಯ್ಕೆ ಮಾಡಿಕೊಳ್ಳಲಾಗುವುದು. ಆಯ್ಕೆಯಾದ ಪ್ರತಿ ಅಪ್ರೆಂಟಿಸ್‌ಗೆ ಮಾಹೆಯಾನ ರೂ. 15,000/- ಗಳ ಸ್ಟೈಪೆಂಡ್ ನೀಡಲಾಗುವುದು. ಇಲಾಖೆಯ ಕ್ಷೇತ್ರ ಪ್ರಚಾರ ಕಾರ್ಯಗಳಲ್ಲಿ, ಸುದ್ದಿ ಸಂಗ್ರಹ, ರಚನೆ ಹಾಗೂ ವಿಶೇಷ ಲೇಖನ ರಚನೆಗಳಲ್ಲಿ ತರಬೇತಿ ನೀಡಲಾಗುವುದು.

ಅಭ್ಯರ್ಥಿಗಳು ಪತ್ರಿಕೋದ್ಯಮದಲ್ಲಿ ಪದವಿ/ಸ್ನಾತಕೋತ್ತರ ಪದವಿ ಪಡೆದಿರಬೇಕು. ಕಂಪ್ಯೂಟರ್ ಜ್ಞಾನ ಹೊಂದಿದ್ದು, ಕನ್ನಡ ಭಾಷೆ ಬಳಕೆಯಲ್ಲಿ ಪ್ರಬುದ್ಧತೆ ಇರಬೇಕು. ಅರ್ಜಿ ಸಲ್ಲಿಸಲು ನಿಗಧಿ ಪಡಿಸಿದ ದಿನಾಂಕದಂದು ಅಭ್ಯರ್ಥಿಗಳ ವಯಸ್ಸು 40 ವರ್ಷದೊಳಗಿರಬೇಕು.

ಅರ್ಜಿಯೊಂದಿಗೆ ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಪದವಿ ಪ್ರಮಾಣ ಪತ್ರ, ಸ್ನಾತಕೋತ್ತರ ಪದವಿ ಪ್ರಮಾಣಪತ್ರ, ಜಾತಿ ಪ್ರಮಾಣ ಪತ್ರ, ಪಾಸ್ ಪೋರ್ಟ್ ಅಳತೆಯ ಎರಡು ಭಾವಚಿತ್ರ ಹಾಗೂ ಇನ್ನಿತರ ಪೂರಕ ದಾಖಲೆಗಳನ್ನು ದ್ವಿ-ಪ್ರತಿಯಲ್ಲಿ ನವೆಂಬರ್ 10, 2020 ರೊಳಗಾಗಿ ಸಲ್ಲಿಸಬೇಕು.

ಆಸಕ್ತರು ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯನ್ನು ಸಂಪರ್ಕಿಸಬಹುದಾಗಿದೆ.